[redacted]

ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ಮಾದರಿ ನೀತಿಸಂಹಿತೆ ಉಲ್ಲಂಘಿಸಿದರೆ ಕ್ರಮ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ, ಏ.–: ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಆಯಾ ಪಕ್ಷದ ತಾರಾಪ್ರಚಾರಕರ ಜತೆ ಪ್ರಚಾರ ಕಾರ್ಯಕ್ರಮದ ವೇದಿಕೆಯನ್ನು ಹಂಚಿಕೊಂಡರೆ ಆ ಕಾರ್ಯಕ್ರಮದ ಸಂಪೂರ್ಣ ವೆಚ್ಚವನ್ನು ಅಭ್ಯರ್ಥಿಗಳ ವೆಚ್ಚಕ್ಕೆ ಸೇರಿಸಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕರು, ವೆಚ್ಚ ವೀಕ್ಷಕರ ಉಪಸ್ಥಿತಿಯಲ್ಲಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ(ಏ.23) ನಡೆದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಸಹಾಯಕ ಚುನಾವಣಾಧಿಕಾರಿಗಳು ಮತ್ತು ನೋಡಲ್ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಮಂದಿರ, ಮಸೀದಿ, ಚರ್ಚ್ ಸೇರಿದಂತೆ ಯಾವುದೇ ಧಾರ್ಮಿಕ ಸ್ಥಳಗಳಲ್ಲಿ ಚುನಾವಣಾ ಪ್ರಚಾರ ಮಾಡಬಾರದು. ಇಂತಹ ಪ್ರಕರಣಗಳು ಕಂಡುಬಂದರೆ ಪ್ರಕರಣ ದಾಖಲಿಸಲಾಗುವುದು.
ಯಾವುದೇ ಶಿಕ್ಷಕಣ ಸಂಸ್ಥೆಗಳಲ್ಲಿ ಪ್ರಚಾರಕಾರ್ಯ ಕೈಗೊಳ್ಳಬೇಕಾದರೆ ಮುಂಚಿತವಾಗಿ ಸಂಬಂಧಿಸಿದ ಸಂಸ್ಥೆಯಿಂದ ಅನುಮತಿ ಪಡೆದುಕೊಳ್ಳಬೇಕು ಎಂದರು.

ಚುನಾವಣಾ ಆಯೋಗದಿಂದ ನಿಯೋಜಿತಗೊಂಡಿರುವ ಸಾಮಾನ್ಯ ವೀಕ್ಷಕರು, ಪೊಲೀಸ್ ವೀಕ್ಷಕರು ಹಾಗೂ ವೆಚ್ಚ ವೀಕ್ಷಕರು ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ. ಆದ್ದರಿಂದ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದೂರು ಅಥವಾ ಲೋಪದೋಷಗಳು ಕಂಡುಬಂದರೆ ವೀಕ್ಷಕರಿಗೆ ಮಾಹಿತಿಯನ್ನು ನೀಡಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.
ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮಿತಿ 95 ಲಕ್ಷ:ವೆಚ್ಚ ನೋಡಲ್ ಅಧಿಕಾರಿ ಶಂಕರಾನಂದ ಬನಶಂಕರಿ ಅವರು, ಚುನಾವಣೆಗಾಗಿ ಅಭ್ಯರ್ಥಿಗಳು ಮಾಡಬಹುದಾದ ಕಾನೂನುಬದ್ಧ ಖರ್ಚು–ವೆಚ್ಚಗಳ ಕುರಿತು ಮಾಹಿತಿಯನ್ನು ನೀಡಿದರು.ರಾಜ್ಯದಲ್ಲಿರುವ ಪ್ರತಿ ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಯು 95 ಲಕ್ಷ ರೂಪಾಯಿ ವೆಚ್ಚ ಮಾಡಬಹುದು. ಚುನಾವಣಾ ಪ್ರಚಾರ, ವಾಹನ ಬಳಕೆ, ಜಾಹೀರಾತು ಇತ್ಯಾದಿ ಕಾನೂನು ಬದ್ಧ ವೆಚ್ಚಗಳನ್ನು ಮಾಡಬಹುದು. ಆದರೆ ಮತದಾರರಿಗೆ ಊಟೋಪಹಾರ ಅಥವಾ ಆಮಿಷಗಳನ್ನು ಒಡ್ಡುವಂತಿಲ್ಲ ಎಂದರು.ಅಭ್ಯರ್ಥಿಗಳು ತಮ್ಮ ಜಂಟಿ ಖಾತೆಯ ಮೂಲಕವೇ ಚುನಾವಣಾ ಪ್ರಚಾರದ ವೆಚ್ಚ ಮಾಡಬಹುದು. ಹತ್ತು ಸಾವಿರಕ್ಕಿಂತ ಹೆಚ್ಚಿನ ಮೊತ್ತವನ್ನು ಕಡ್ಡಾಯವಾಗಿ ಚೆಕ್ ಮೂಲಕವೇ ಮಾಡಬೇಕು. ಯುಪಿಐ ಮೂಲಕ ಕೂಡ ವೆಚ್ಚ ಪಾವತಿಸಬಹುದು ಎಂದು ಬನಶಂಕರಿ ತಿಳಿಸಿದರು.

ತಾರಾ ಪ್ರಚಾರಕರ ಜತೆ ಅಭ್ಯರ್ಥಿಗಳು ವೇದಿಕೆ ಹಂಚಿಕೊಂಡರೆ ಅಥವಾ ತಾರಾ ಪ್ರಚಾರಕರು ಅಭ್ಯರ್ಥಿಗಳ ಹೆಸರು ಪ್ರಸ್ತಾಪಿಸಿದರೆ, ಕಾರ್ಯಕ್ರಮದ ವೇದಿಕೆ ಅಥವಾ ಕಾರ್ಯಕ್ರಮದಲ್ಲಿ ಅಭ್ಯರ್ಥಿಗಳ ಭಾವಚಿತ್ರ ಬಳಸಿದರೆ ಸದರಿ ಪ್ರಚಾರ ಕಾರ್ಯಕ್ರಮದ ಖರ್ಚು–ವೆಚ್ಚವನ್ನು ಸಂಬಂಧಿಸಿದ ಅಭ್ಯರ್ಥಿಗಳ ಲೆಕ್ಕಕ್ಕೆ ಸೇರಿಸಲಾಗುವುದು ಎಂದು ಬನಶಂಕರಿ ವಿವರಿಸಿದರು.

ಇದೇ ಸಂದರ್ಭದಲ್ಲಿ ಮಾದರಿ ನೀತಿಸಂಹಿತೆ ಕುರಿತು ವಿವರಿಸಿದ ನೋಡಲ್ ಅಧಿಕಾರಿ ಶಿವನಗೌಡ ಪಾಟೀಲ ಅವರು, ಪ್ರಚಾರದ ಸಮಯದಲ್ಲಿ ಜಾತಿ–ಧರ್ಮ, ಸಮುದಾಯ, ಭಾಷೆಗಳ ಮಧ್ಯೆ ಸಂಘರ್ಷಕ್ಕೆ ಪ್ರಚೋದನೆ ನೀಡುವುದು ಹಾಗೂ ಮತದಾರರಿಗೆ ಹಣ ಅಥವಾ ಯಾವುದೇ ಬಗೆಯ ವಸ್ತುಗಳ ಉಡುಗೊರೆಯ ಆಮಿಷಯೊಡ್ಡುವುದು ಮಾದರಿ ನೀತಿಸಂಹಿತೆಯ ಉಲ್ಲಂಘನೆಯಾಗುತ್ತದೆ ಎಂದು ತಿಳಿಸಿದರು.

ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದಂತೆ ಪ್ರತಿಯೊಂದಕ್ಕೂ ಅನುಮತಿಯ ಅಗತ್ಯವಿರುತ್ತದೆ. ಆದ್ದರಿಂದ ಕಡ್ಡಾಯವಾಗಿ ಅನುಮತಿ ಪಡೆದುಕೊಂಡು ಮಾಡಬೇಕಾಗಿರುತ್ತದೆ ಎಂದು ಹೇಳಿದರು.

ಸಾಮಾನ್ಯ ವೀಕ್ಷಕರಾದ ಎಂ.ಕೆ.ಅರವಿಂದ ಕುಮಾರ್, ಪೊಲೀಸ್ ವೀಕ್ಷಕರಾದ ಪವನ ಕುಮಾರ್, ವೆಚ್ಚ ವೀಕ್ಷಕರಾದ ಹರಕ್ರಿಪಾಲ್ ಖಟಾನಾ ಹಾಗೂ ನರಸಿಂಗರಾವ್ ಬಿ., ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಡಿಸಿಪಿ ರೋಹನ್ ಜಗದೀಶ್, ಪ್ರೊಬೇಷನರಿ ಐ.ಎ.ಎಸ್. ಅಧಿಕಾರಿ ಶುಭಂ ಶುಕ್ಲಾ ಉಪಸ್ಥಿತರಿದ್ದರು.
ಎಲ್ಲ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ನೋಡಲ್ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ಬಳ್ಳಾರಿ ಲೋಕಸಭಾ ಚುನಾವಣೆ ಅಂತಿಮ ಕಣದಲ್ಲಿ 10 ಅಭ್ಯರ್ಥಿಗಳು: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಮಾಹಿತಿ

ಬಳ್ಳಾರಿ,ಏ.23.09–ಬಳ್ಳಾರಿ (ಪ.ಪಂ) ಲೋಕಸಭಾ ಚುನಾವಣೆಗೆ ಸಲ್ಲಿಕೆಯಾಗಿದ್ದ ನಾಮಪತ್ರಗಳನ್ನು ಹಿಂಪಡೆಯುವ ದಿನವಾದ ಸೋಮವಾರದಂದು, ಓರ್ವ ಅಭ್ಯರ್ಥಿಯು ತಮ್ಮ ಉಮೇದುವಾರಿಕೆಯನ್ನು ವಾಪಸ್ ತೆಗೆದುಕೊಂಡಿದ್ದು, ಅಂತಿಮ ಕಣದಲ್ಲಿ 10 ಅಭ್ಯರ್ಥಿಗಳು ಇದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದ ಕೆಸ್ವಾನ್ ವಿಡಿಯೋ (ವಿಸಿ ಹಾಲ್) ಸಭಾಂಗಣದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.
ಏ.12 ರಿಂದ 19 ರವರೆಗೆ ನಾಮಪತ್ರಸಲ್ಲಿಕೆಯಅವಧಿಯಲ್ಲಿ ಒಟ್ಟು 11 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು. ಏ.20 ರಂದು ನಡೆದ ನಾಮಪತ್ರಗಳ ಪರಿಶೀಲನೆಯಲ್ಲಿ 11 ಅಭ್ಯರ್ಥಿಗಳ ನಾಮಪತ್ರಗಳು ಕ್ರಮವಾಗಿದ್ದವು. ನಾಮಪತ್ರ ವಾಪಸ್ಸು ಪಡೆಯುವ ದಿನವಾದ ಏ.22 (ಸೋಮವಾರ) ರಂದು ಪಕ್ಷೇತರ ಅಭ್ಯರ್ಥಿ ಬಿ.ಭಾಗ್ಯಲಕ್ಷ್ಮಿ ತಮ್ಮ ಉಮೇದುವಾರಿಕೆಯನ್ನು ಹಿಂಪಡೆದಿದ್ದಾರೆ ಎಂದು ತಿಳಿಸಿದರು.*ಅಂತಿಮ ಕಣದಲ್ಲಿ 10 ಅಭ್ಯರ್ಥಿಗಳು:*–ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳಾದ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಈ.ತುಕಾರಾಮ್, ಬಹುಜನ ಸಮಾಜ ಪಾರ್ಟಿಯ ಅಭ್ಯರ್ಥಿ ವಾಲ್ಮೀಕಿ ಕೃಷ್ಣಪ್ಪ, ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಬಿ.ಶ್ರೀರಾಮುಲು,ಅದೇರೀತಿಯಾಗಿ ನೋಂದಾಯಿತ ರಾಜಕೀಯ ಪಕ್ಷಗಳ ಅಭ್ಯರ್ಥಿಗಳಾದ (ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳನ್ನು ಹೊರತುಪಡಿಸಿ) ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿ ಸಿ.ಚನ್ನವೀರ, ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಪಕ್ಷದ ಅಭ್ಯರ್ಥಿ ಎ.ದೇವದಾಸ್, ಪ್ರಹರ್ ಜನಶಕ್ತಿ ಪಾರ್ಟಿಯ ಅಭ್ಯರ್ಥಿ ಮಂಜಪ್ಪ, ನವಭಾರತ್ ಸೇನ ಪಕ್ಷದ ಅಭ್ಯರ್ಥಿಜೆ.ಸ್ವಾಮಿಮತ್ತು ಪಕ್ಷೇತರ ಅಭ್ಯರ್ಥಿಗಳಾದ ಅರುಣ್ ಎಸ್ ಹಿರೇಹಾಳ್, ವೈ.ಪಂಪಾಪತಿ, ವೀರೇಶ ಅಂತಿಮಕಣದಲ್ಲಿರುವ ಅಭ್ಯರ್ಥಿಗಳಾಗಿದ್ದಾರೆ ಎಂದು ವಿವರಿಸಿದರು.ಈಗಾಗಲೇ ಪಕ್ಷೇತರ ಅಭ್ಯರ್ಥಿಗಳಿಗೆ ಚಿಹ್ನೆ ಕೂಡ ಹಂಚಿಕೆ ಮಾಡಲಾಗಿದ್ದು, ಮೇ 07 ರಂದು ಮತದಾನ ನಡೆಯಲಿದೆ ಎಂದರು.
ಮತದಾನ ದಿನದಂದು ಅಗತ್ಯ ವ್ಯವಸ್ಥೆ:–ಬೇಸಿಗೆ ಬಿಸಿಲಿರುವುದರಿಂದ ಮತದಾನ ದಿನದಂದು ಸಾರ್ವಜನಕರಿಗೆ ಯಾವುದೇತೊಂದರೆಯಾಗದಂತೆ ಮತಗಟ್ಟೆಗಳಲ್ಲಿ ಮತದಾರರು ನಿಲ್ಲಲು ನೆರಳು ಇಲ್ಲದಿರುವೆಡೆ ಶ್ಯಾಮಿಯಾನ ವ್ಯವಸ್ಥೆ ಮಾಡಲಾಗುವುದು ಅಲ್ಲದೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ಹಾಗೂ ಇತರೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದುತಿಳಿಸಿದರು.ಮತದಾರರನ್ನು ಮತಗಟ್ಟೆಗೆ ಸೆಳೆಯಲು 40 ಸಖಿ ಮಹಿಳಾ ಮತಗಟ್ಟೆಗಳು, 12 ಎಥ್ನಿಕ್, 08 ವಿಶೇಳಚೇತನ ಹಾಗೂ 08 ಯುವ ಮತಗಟ್ಟೆಗಳು, ಥೀಮ್ ಆಧಾರಿತ 8 ಮತಗಟ್ಟೆ ಕೇಂದ್ರಗಳನ್ನುಸ್ಥಾಪಿಸಲಾಗುವುದು ಎಂದರು.ಜಿಲ್ಲೆಯ ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಈಗಾಗಲೇ ಹಲವಾರು ವೈವಿಧ್ಯಮಯಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ತಿಳಿಸಿದರು.*ಚುನಾವಣಾ ಅಕ್ರಮ ತಡೆಯಲು 1950 ಟೋಲ್ ಫ್ರೀ ಸಂಖ್ಯೆ ಬಳಸಿ:*–ಚುನಾವಣಾ ಅಕ್ರಮಗಳಿಗೆ ಸಂಬಂಧಿಸಿದಂತೆ ಮಾದರಿ ನೀತಿ ಸಂಹಿತೆ ಉಲ್ಲಂಘನೆ, ಹಣ–ಉಡುಗೋರೆ ಹಂಚುವುದು ಹಾಗೂ ಚುನಾವಣೆ ಸಂಬಂಧಿತ ಇತರೆ ಮಾಹಿತಿಗಾಗಿ ಟೋಲ್ ಫ್ರೀ ಸಂಖ್ಯೆ 1950 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಅಥವಾ ಸಿ–ವಿಜಿಲ್ ಆಪ್ ಮೂಲಕ ದೂರು ಸಲ್ಲಿಸಬಹುದು ಎಂದರು.
ಚುನಾವಣಾ ಕಾರ್ಯಗಳಲ್ಲಿ ಮಕ್ಕಳನ್ನುಬಳಸಿಕೊಳ್ಳುವಂತಿಲ್ಲ:–ಚುನಾವಣೆ ಕಾರ್ಯ ಮತ್ತು ಪ್ರಚಾರ ಕಾರ್ಯಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ರಾಷ್ಟ್ರೀಯ ಮಕ್ಕಳ ಹಕ್ಕುಗಳ ಆಯೋಗ ಹಾಗೂ ಚುನಾವಣಾ ಆಯೋಗದ ನಿರ್ದೇಶನವಿದ್ದು, ಯಾವುದೇ ಪಕ್ಷಗಳು ಅಥವಾ ಅಭ್ಯರ್ಥಿಗಳು 18 ವರ್ಷದೊಳಗಿನ ಮಕ್ಕಳನ್ನು ಚುನಾವಣಾ ಪ್ರಚಾರಕ್ಕೆ ಬಳಸಿಕೊಂಡಲ್ಲಿಕಾಯ್ದೆಯನ್ವಯ ಕಠಿಣಕ್ರಮಜರುಗಿಸಲಾಗುವುದು ಎಂದು ಡಿಸಿ ಮಿಶ್ರಾ ಅವರು ಖಡಕ್‌ಸೂಚನೆನೀಡಿದರುಸುದ್ದಿಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಹಾಗೂಜಿಲ್ಲಾಚುನಾವಣಾಧಿಕಾರಿಗಳ ಕಚೇರಿಯ ಸಿಬ್ಬಂದಿಗಳು ಇದ್ದರು.

ಎರಡನೇ ಹಂತದ ರ್‍ಯಾಂಡಮೈಜೇಷನ್ ಪೂರ್ಣಮತಗಟ್ಟೆವಾರು ಇವಿಎಂ ಹಂಚಿಕೆ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ, ಏ.–: ಲೋಕಸಭಾ ಚುನಾವಣೆಗಾಗಿ 02–ಬೆಳಗಾವಿ ಲೋಕಸಭೆ ಕ್ಷೇತ್ರದ ಮತಗಟ್ಟೆವಾರು ಎಲೆಕ್ಟ್ರಾನಿಕ್ ಮತಯಂತ್ರ(ಇವಿಎಂ)ಗಳ ವಿಂಗಡಣೆಯನ್ನು ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಎರಡನೇ ಹಂತದ ರ್‍ಯಾಂಯಾಂಡಮೈಜೇಷನ್ ಮೂಲಕ ನಿರ್ಧರಿಸಲಾಯಿತು.
ಬೆಳಗಾವಿ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕರು, ವೆಚ್ಚ ವೀಕ್ಷಕರ ಉಪಸ್ಥಿತಿಯಲ್ಲಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ(ಏ.23) ನಡೆದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ರ್‍ಯಾಯಾಂಡಮೈಜೇಷನ್ ಪ್ರಕ್ರಿಯೆ ನಡೆಯಿತು.

ಈಗಾಗಲೇ ಮೊದಲ ಹಂತದ ರ್‍ಯಾಯಾಂಡಮೈಜೇಷನ್ ಪೂರ್ಣಗೊಳಿಸಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಂಟು ವಿಧಾನಸಭಾ ಕ್ಷೇತ್ರದ ಸ್ಟ್ರಾಂಗ್ ರೂಮ್ ಗಳಿಗೆ ಕಳಿಸಲಾಗಿದ್ದು, ಎರಡನೇ ಹಂತದ ರ್‍ಯಾಂಯಾಂಡಮೈಜೇಷನ್ ಮೂಲಕ ಮತಗಟ್ಟೆವಾರು ಕಳಿಸಬೇಕಾದ ಎಲೆಕ್ಟ್ರಾನಿಕ್ ಮತಯಂತ್ರ(ಇವಿಎಂ)ಗಳನ್ನು ವಿಂಗಡಿಸಲಾಯಿತು.
ರ್‍ಯಾಂಡಮೈಜೇಷನ್ ಪ್ರಕ್ರಿಯೆ ಬಳಿಕ ಮಾತನಾಡಿದ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು, ಎರಡನೇ ಹಂತದ ರ್‍ಯಾಯಾಂಡಮೈಜೇಷನ್ ಮೂಲಕ ನಿರ್ಧರಿಸಲಾಗಿರುವ ಎಲೆಕ್ಟ್ರಾನಿಕ್ ಮತಯಂತ್ರ(ಇವಿಎಂ)ಗಳನ್ನು ಮಸ್ಟರಿಂಗ್ ದಿನ ಮತಗಟ್ಟೆ ಅಧಿಕಾರಿಗಳ ತಂಡದ ಮೂಲಕ ಆಯಾ ಮತಗಟ್ಟೆಗಳಿಗೆ ಕಳಿಸಲಾಗುವುದು ಎಂದರು.

ಶೇ.130 ರಷ್ಟು ಕಂಟ್ರೋಲ್ ಯುನಿಟ್, ಬ್ಯಾಲೆಟ್ ಯುನಿಟ್ ಮತ್ತು ವಿವಿಪ್ಯಾಟ್ ಗಳನ್ನು ರ್‍ಯಾಯಾಂಡಮೈಜೇಷನ್ ಮೂಲಕ ಅಂತಿಮಗೊಳಿಸಲಾಗುತ್ತದೆ. ಶೇ.100 ರಷ್ಟು ಮತಯಂತ್ರಗಳು ಮತಗಟ್ಟೆಗಳಿಗೆ ಕಳಿಸಲಾಗುತ್ತದೆ. ಹೆಚ್ಚುವರಿ ಇರುವ ಶೇ.30 ರಷ್ಟು ಮತಯಂತ್ರಗಳನ್ನು ಕಾಯ್ದಿರಿಸಲಾಗುತ್ತದೆ. ಮತಗಟ್ಟೆಗಳಿಗೆ ಕಳಿಸಲಾಗಿರುವ ಮತಯಂತ್ರಗಳಲ್ಲಿ ತಾಂತ್ರಿಕ ದೋಷ ಕಂಡುಬಂದಲ್ಲಿ ಕಾಯ್ದಿರಿಸಲಾಗಿರುವ ಮತಯಂತ್ರಗಳನ್ನು ಬಳಕೆ ಮಾಡಲಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಮನೆ ಮನೆಯಿಂದ ಮತಸಂಗ್ರಹ ಏ.26 ರಿಂದ:ಏ.25, 26 ಹಾಗೂ 27 ರಂದು ಮನೆ ಮನೆಗಳಿಗೆ ತೆರಳಿ ಮತಸಂಗ್ರಹ ನಡೆಯಲಿದೆ. ಈಗಾಗಲೇ ನಿಗದಿತ ನಮೂನೆ ಭರ್ತಿಮಾಡುವ ಮೂಲಕ ಮನೆಯಿಂದ ಮತ ಚಲಾವಣೆಗೆ ಒಪ್ಪಿಗೆ ನೀಡಿರುವ 85 ವರ್ಷ ಮೇಲ್ಪಟ್ಟವರು ಹಾಗೂ ವಿಕಲಚೇತನರಿಂದ ಮತಸಂಗ್ರಹ ಮಾಡಲಾಗುವುದು ಎಂದು ಚುನಾವಣಾಧಿಕಾರಿ ನಿತೇಶ್ ಪಾಟೀಲ ವಿವರಿಸಿದರು.

ಮನೆ ಮನೆಗಳಿಗೆ ತೆರಳಿ ಮತ ಸಂಗ್ರಹಿಸುವ ಸಂದರ್ಭದಲ್ಲಿ ರಾಯಕೀಯ ಪಕ್ಷಗಳ ಏಜೆಂಟರು ಉಪಸ್ಥಿತರಿರಬಹುದು. ಆದರೆ ಈ ಬಗ್ಗೆ ಆಯಾ ಪಕ್ಷ ಅಥವಾ ಅಭ್ಯರ್ಥಿಗಳು ಏಜೆಂಟರನ್ನು ನೇಮಿಸಿ ಮುಂಚಿತವಾಗಿ ತಿಳಿಸಬೇಕು ಎಂದರು.

ಸಾಮಾನ್ಯ ವೀಕ್ಷಕರಾದ ಎಂ.ಕೆ.ಅರವಿಂದ ಕುಮಾರ್, ಪೊಲೀಸ್ ವೀಕ್ಷಕರಾದ ಪವನ ಕುಮಾರ್, ವೆಚ್ಚ ವೀಕ್ಷಕರಾದ ಹರಕ್ರಿಪಾಲ್ ಖಟಾನಾ ಹಾಗೂ ನರಸಿಂಗರಾವ್ ಬಿ., ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಡಿಸಿಪಿ ರೋಹನ್ ಜಗದೀಶ್, ಪ್ರೊಬೇಷನರಿ ಐ.ಎ.ಎಸ್. ಅಧಿಕಾರಿ ಶುಭಂ ಶುಕ್ಲಾ ಉಪಸ್ಥಿತರಿದ್ದರು.
ಎಲ್ಲ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ನೋಡಲ್ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು

ಕ್ರಿಕೆಟ್ ಪಂದ್ಯಾವಳಿಯಲ್ಲಿ ಶಿಕ್ಷಣ ಇಲಾಖೆ ಜಯ

ಗದಗ,ಏಪ್ರಿಲ್ 23: ಲೋಕಸಭಾ ಸಾರ್ವತ್ರಿಕ ಚುನಾವಣೆ –2024 ರ ಅಂಗವಾಗಿ ಗದಗ ಜಿಲ್ಲಾ ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾಧ್ಯಮ ತಂಡ ಒಳಗೊಂಡ 15 ಸೀಮಿತ ಓವರ್ ಗಳ ಟೆನ್ನಿಸಿ ಬಾಲ್ ಮತ್ತು ಕ್ರಿಕೆಟ್ ಪಂದ್ಯಾವಳಿ ಹಮ್ಮಿಕೊಂಡಿದೆ.
ಆ ದೆಸೆಯಲ್ಲಿ ಮಂಗಳವಾರ ಮುಂಡರಗಿ ತಾಲೂಕು ಕ್ರೀಡಾಂಗಣದಲ್ಲಿ ನಡೆದ ಕಂದಾಯ ಇಲಾಖೆ ತಂಡದ ವಿರುದ್ದ ಶಿಕ್ಷಣ ಇಲಾಖೆಯು ಎರಡನೇ ಕ್ರಿಕೆಟ್ ಪಂದ್ಯಾವಳಿಯಲ್ಲಿ ಗೆಲುವನ್ನು ಸಾಧಿಸಿದೆ ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ತುಕಾರಾಂ ಪರ ಸಚಿವ ನಾಗೇಂದ್ರ,ನಾರಾ ಭರತ್‌ರೆಡ್ಡಿ,ಅಲ್ಲಂ ಪ್ರಶಾಂತ್ ಬಿರುಸಿನ ಪ್ರಚಾರ

ಬಳ್ಳಾರಿ ಏ –: ಮಹಿಳೆಯರಿಗೆ ಪ್ರತಿ ತಿಂಗಳು ಗೃಹಲಕ್ಷ್ಮೀ ಯೋಜನೆ ಮೂಲಕ 2 ಸಾವಿರ ರೂ. ನೀಡಲಾಗುತ್ತಿದೆ.
ಇದು ನಮ್ಮ ಸಬಲೀಕರಣಕ್ಕೆ ಕಾರಣ ಆಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಹೇಳಿದರು.
ಬಳ್ಳಾರಿ ನಗರದ 23ನೇ ವಾರ್ಡಿನ ನಾಗಪ್ಪನ ಕಟ್ಟೆಯ ಬಳಿ ಬುಧವಾರ ಬೆಳಿಗ್ಗೆ ಬಳ್ಳಾರಿ ಲೋಕಸಭಾ ಚುನಾವಣೆ ಹಿನ್ನೆಲೆ ಕಾಂಗ್ರೆಸ್ ಅಭ್ಯರ್ಥಿ ಈ.ತುಕಾರಾಂ ಅವರ ಪರ ಮತ ಯಾಚಿಸಿ ಮಾತನಾಡಿದರು.
ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿರುವ ಬಿಜೆಪಿಯನ್ನು ಸೋಲಿಸಬೇಕು, ಈ ಚುನಾವಣೆಯಲ್ಲಿ ಮತ್ತೆ ಬಿಜೆಪಿಯನ್ನು ಗೆಲ್ಲಿಸಿದರೆ ಜನರ ಜೀವನ ಮತ್ತಷ್ಟು ಸಂಕಷ್ಟಕ್ಕೆ ಸಿಲುಕಲಿದೆ ಎಂದರು. ಕೇಂದ್ರ ಸರ್ಕಾರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಪ್ರತಿ ವರ್ಷಕ್ಕೆ 1 ಲಕ್ಷ ರೂ.ಗಳನ್ನು ನೀಡಲು ಮಹಾಲಕ್ಷ್ಮೀ ಯೋಜನೆ ಜಾರಿಗೆ ಬರಲಿದೆ. ಈ ಯೋಜನೆಯಿಂದ ನಮ್ಮ ಕುಟುಂಬಗಳು ಆರ್ಥಿಕವಾಗಿ ಸಬಲ ಆಗಲಿವೆ ಎಂದು ಬಿ.ನಾಗೇಂದ್ರ ಹೇಳಿದರು.ಈ ಚುನಾವಣೆ ಬಹಳ ಮುಖ್ಯ ಚುನಾವಣೆ, ಈ ಚುನಾವಣೆಯಲ್ಲಿ ಶತಾಯಗತಾಯ ಕಾಂಗ್ರೆಸ್ ಗೆಲ್ಲಬೇಕು, ಬಿಜೆಪಿಯವರು ನೀಡುವ ಬಿಡಿಗಾಸಿಗೆ ಯಾರಾದರೂ ಆಸೆ ತೋರಿಸಿದರೆ ಅಂಥವರಿಗೆ ಮನವೊಲಿಸಬೇಕು, ಕಾಂಗ್ರೆಸ್ ಸರ್ಕಾರದ ಯೋಜನೆಗಳ ಬಗ್ಗೆ ತಿಳಿಸಿ ಅವರು ಕೂಡ ಕಾಂಗ್ರೆಸ್ ಗೆ ಮತ ನೀಡುವಂತೆ ಅರಿವು ಮೂಡಿಸಬೇಕು ಎಂದರು.
ಈ ವೇಳೆ ಮಾತನಾಡಿದ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ; ನಾನು ಶಾಸಕನಾಗಿ ಆಯ್ಕೆಯಾಗಿ ಅಭಿವೃದ್ಧಿ ಕೆಲಸ ಮಾಡುತ್ತಿದ್ದರೆ ಅದಕ್ಕೆ ನಮ್ಮ ಆಶೀರ್ವಾದ ಕಾರಣ ಎಂದು ಹೇಳಿದರು.
ನಮ್ಮ ಮನೆಗಳನ್ನ ಒತ್ತುವರಿ ಹೆಸರಿನಲ್ಲಿ ತೆರವು ಮಾಡುತ್ತಾರೆಂಬ ಆತಂಕ ನಿವಾರಣೆ ಮಾಡಿದ್ದೇನೆ ಎಂದ ಅವರು, ನಾವು ಮಾತು ಕೊಟ್ಟಂತೆ ಐದು ಗ್ಯಾರಂಟಿಗಳನ್ನು ಈಡೇರಿಸಿದ್ದೇವೆ, ಚುನಾವಣೆ ಸಂದರ್ಭ ನಮ್ಮ ಗ್ಯಾರಂಟಿ ಯೋಜನೆಗಳ ಬಗ್ಗೆ ಬಿಜೆಪಿಯವರು ಅವಹೇಳನಕಾರಿಯಾಗಿ ಮಾತನಾಡಿದರು, ಆದರೆ ನಮ್ಮ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಭರವಸೆ ಈಡೇರಿಸಿದ್ದಾರೆ ಎಂದರು.
ಮಹಾನಂದಿ ಕೊಟ್ಟಂ ಪ್ರದೇಶದ ಶಾಲೆಗೆ ಒಂದೂವರೆ ಕೋಟಿ ರೂ. ಮಂಜೂರು ಮಾಡಿಸಿರುವೆ, ಸಚಿವ ಬಿ.ನಾಗೇಂದ್ರ ಅವರ ಸಹಕಾರದಿಂದ ಜಿಲ್ಲಾ ನ್ಯಾಯಾಲಯದ ಕಟ್ಟಡ ಕಾಮಗಾರಿಯ ಬಾಕಿ ಮೊತ್ತ 20 ಕೋಟಿ ರೂ. ಬಿಡುಗಡೆ ಮಾಡಿಸಿರುವೆ ಎಂದರು.
ಬಳ್ಳಾರಿ ನಗರದ ಜನರಿಗೆ ಪಟ್ಟಾ ನೀಡುವ ಕೆಲಸ ಬಾಕಿ ಇದೆ. ನಗರದ 5 ಸಾವಿರ ಜನರಿಗೆ ಪಟ್ಟಾ ಕೊಡಲು ಸಿದ್ಧತೆ ಮಾಡಿಕೊಂಡಿದ್ದೆವು, ಆದರೆ ಚುನಾವಣೆ ಬಂದಿದ್ದರಿಂದ ಪಟ್ಟಾ ಹಂಚುವುದನ್ನು ಮುಂದೂಡಿದ್ದೇವೆ ಎಂದು ಶಾಸಕ ಭರತ್ ರೆಡ್ಡಿ ತಿಳಿಸಿದರು.
ಕಾಂಗ್ರೆಸ್ ಅಭ್ಯರ್ಥಿ ಈ.ತುಕಾರಾಂ ಅವರಿಗೆ ಮತ ನೀಡಬೇಕು, ತುಕಾರಾಂ ಅವರು ಬೇರೆ ಅಲ್ಲ ನಾನು ಬೇರೆ ಅಲ್ಲ, ತುಕಾರಾಂ ಅವರಿಗೆ ಮತ ನೀಡಿದರೆ ನನಗೆ ಮತ ನೀಡಿದಂತೆ, ತುಕಾರಾಂ ಅವರನ್ನು ಗೆಲ್ಲಿಸಿ ನನ್ನ ಕೈ ಬಲಪಡಿಸಿ ಎಂದರು.ಶಾಸಕ ಭರತ್ ರೆಡ್ಡಿ ತಿಳಿಸಿದರು.
ಕಾಂಗ್ರೆಸ್ ಅಭ್ಯರ್ಥಿ ಈ.ತುಕಾರಾಂ ಅವರಿಗೆ ಮತ ನೀಡಬೇಕು, ತುಕಾರಾಂ ಅವರು ಬೇರೆ ಅಲ್ಲ ನಾನು ಬೇರೆ ಅಲ್ಲ, ತುಕಾರಾಂ ಅವರಿಗೆ ಮತ ನೀಡಿದರೆ ನನಗೆ ಮತ ನೀಡಿದಂತೆ, ತುಕಾರಾಂ ಅವರನ್ನು ಗೆಲ್ಲಿಸಿ ನನ್ನ ಕೈ ಬಲಪಡಿಸಿ ಎಂದರು.
ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷ ಅಲ್ಲಂ ಪ್ರಶಾಂತ್, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎ.ಮಾನಯ್ಯ, ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಚಿದಾನಂದಪ್ಪ, ಬುಡಾ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಮಾಜಿ ಮೇಯರ್ ಎಂ.ರಾಜೇಶ್ವರಿ ಸುಬ್ಬರಾಯುಡು, ಡಿಸಿಸಿ ಕಾರ್ಯಾಧ್ಯಕ್ಷ ವಿಷ್ಣು ಬೋಯಪಾಟಿ, ಬ್ಲಾಕ್ ಅಧ್ಯಕ್ಷ ಕೆ.ಎಂ.ಅಭಿಲಾಶ್, ಪದ್ಮಾ, ಶೋಭಾ ಕಳಿಂಗ, ಪದ್ಮಾ, ಚಂಪಾ ಚವ್ಹಾಣ್, ವೆಂಕಟೇಶ ಪ್ರಸಾದ್,ಮುರಳಿಕೃಷ್ಣ, ಪಿ.ಜಗನ್ನಾಥ್, ಅರ್ಷದ್, ಶಿವಕುಮಾರ್, ಬಿ.ಎಂ.ಪಾಟೀಲ್, ಚಾನಾಳ್ ಶೇಖರ್, ನಾರಾಯಣ ರೆಡ್ಡಿ, ಶ್ರೀಧರ್, ಬೆಣಕಲ್ ರಘು, ಟಿಲ್ಲು, ಧರ್ಮಶ್ರೀ, ಮೋಕ ನಾಗರಾಜ ಇತರರು ಹಾಜರಿದ್ದರು.

ಮದುವೆ ಸಮಾರಂಭದಲ್ಲಿ ಮತದಾನ ಜಾಗೃತಿ

ಕೊಪ್ಪಳ, ಏಪ್ರಿಲ್ – : ಮೇ–7ರಂದು ಲೋಕಸಭಾ ಚುನಾವಣೆ ಜರುಗಲಿರುವ ಪ್ರಯುಕ್ತ ಕೊಪ್ಪಳ ತಾಲೂಕ ಸ್ವೀಪ್ ಸಮಿತಿಯಿಂದ ಸೋಮವಾರದಂದು ಭಾಗ್ಯನಗರದ ಕಠಾರೆ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದ್ದ ಭಾಗ್ಯನಗರ ಪಟ್ಟಣದ ಸಸಿಮಠ ಕುಟುಂಬದ ಸಿದ್ದಾರ್ಥ ಸ್ವಾಮಿ ಹಾಗು ರೋಹಿಣಿ ಇವರ ವಿವಾಹ ಸಮಾರಂಭದಲ್ಲಿ ಮತದಾನ ಜಾಗೃತಿಯನ್ನು ಮೂಡಿಸಲಾಯಿತು. ವಿವಾಹ ಸಮಾರಂಭದಲ್ಲಿ ಹಾಜರಿದ್ದ ನವ ವಧು–ವರರು ವೇದಿಕೆಯಲ್ಲಿ ನಮ್ಮ ಮತ, ನಮ್ಮ ಹಕ್ಕು, ಪ್ರತಿ ಮತ ಅತ್ಯಮೂಲ್ಯ ತಪ್ಪದೇ ಮತದಾನ ಮಾಡಿ, ನನ್ನ ಮತ ಮಾರಾಟಕ್ಕಿಲ್ಲ, ಮತ ಚಲಾಯಿಸೋಣ ಪ್ರಜಾಪ್ರಭುತ್ವ ಗಟ್ಟಿಗೊಳಿಸೋಣ ಇತ್ಯಾದಿ ಸ್ಲೋಗನ್‌ಗಳನ್ನು ಒಳಗೊಂಡ ಬಟಿಂಗ್ಸ್ ಮೂಲಕ ನವ ವಧು–ವರರು ಮತದಾನ ಜಾಗೃತಿ ಮೂಡಿಸಿದ್ದು ಕಾರ್ಯಕ್ರಮದಲ್ಲಿ ಹಾಜರಿದ್ದವರಿಗೆ ಖುಷಿ ನೀಡಿತು.
ಕಾರ್ಯಕ್ರಮದಲ್ಲಿ ತಾಲೂಕ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗು ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ದುಂಡಪ್ಪ ತುರಾದಿ ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತಿ ಸಹಾಯಕ ಕಾರ್ಯದರ್ಶಿಗಳಾದ ಶಿವಪ್ಪ ಸುಬೇದಾರ್ ರವರು ನವ ವಧು ವರರಿಗೆ ಅಕ್ಷತೆ ಹಾಕುವುದರ ಮೂಲಕ ಶುಭ ಹಾರೈಸಿದರು. ಕಡ್ಡಾಯವಾಗಿ ಮೇ–7ರಂದು ತಪ್ಪದೇ ಮತ ಚಲಾಯಿಸಿ ರೆಂದು ಸಸಿಮಠ ಕುಟುಂಬದವರಿಗೆ ಹಾಗು ಹಾಜರಿದ್ದವರಿಗೆ ಕರೆ ನೀಡಿದರು.
ಸೆಲ್ಫಿ ಸ್ಟ್ಯಾಂಡ್‌ನಲ್ಲಿ ಫೋಟೋ ತೆಗೆಸಿಕೊಂಡ ವಧು–ವರರು: ತಾಲೂಕ ಪಂಚಾಯತಿ ವತಿಯಿಂದ ಸಿದ್ದಪಡಿಸಲಾದ ಸಾರ್ವತ್ರಿಕ ಲೋಕಸಭಾ ಚುನಾವಣೆಯ ಸೆಲ್ಫಿ ಸ್ಟ್ಯಾಂಡ್‌ನಲ್ಲಿ ನವ ವಧು ವರರು ಮತದಾನ ಮಾ ಡುವ ಕುರಿತು ಫೋಟೋ ತೆಗೆಸಿಕೊಂಡರು.ಈ ಸಂದರ್ಭ ಜಿಲ್ಲಾ ಪಂಚಾಯತ ಆಡಳಿತ ಸಹಾಯಕ ನಿರ್ದೇ ಶಕರಾದ ಎಸ್. ಆರ್.ಪೂಜಾರ, ತಾಲೂಕ ಪಂಚಾ ಯತಿಯ ಯೋ ಜನಾ ಧಿಕಾರಿ ರಾಜೇಸಾಬ ನದಾ ಫ್, ಜಿಲ್ಲಾ ಐಇಸಿ ಸಂಯೋಜಕ ಶ್ರೀನ ವಾಸ ಚಿತ್ರಗಾರ, ತಾಲೂಕ ಸ್ವೀಪ್ ಸಮಿತಿಯ ಸದಸ್ಯರಾದ ಬಸವ ರಾಜ ಬಳಿಗಾರ, ದೇವರಾಜ ಪತ್ತಾರ, ಜಿಲ್ಲಾ ಪಂಚಾ ಯತ ಸಿಬ್ಬಂದಿ ಗಳು, ಪಂಚಾ ಯತ ಅಭಿ ವೃದ್ದಿ ಅಧಿಕಾ ರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಗು ಇನ್ನಿತರರು ಹಾಜರಿದ್ದರು.